**ಅತಿ ತುರ್ತು**

# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಅ.ವಿ:ಸುತ್ತೋಲೆ:2023-24 | 3704 ದಿನಾಂಕ:20.01.2024

## : ಸುತ್ತೋಲೆ :

**ವಿಷಯ: ವಿಶ್ವವಿದ್ಯಾನಿಲಯ ವ್ಯಾಪ್ತಿಯ ಎಲ್ಲಾ ಘಟಕ ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ಸಂವಿಧಾನ ಕುರಿತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು.**

**ಉಲ್ಲೇಖ: 1. ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ಇವರ ಪತ್ರ ದಿನಾಂಕ:18.01.2024**
**2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:20.01.2024**

* * * * *

ಸರ್ಕಾರವು ದಿನಾಂಕ:26.01.2024 ರಂದು ಸಂವಿಧಾನ ಜಾಗೃತಿ ಜಾತ ಕಾರ್ಯಕ್ರಮವನ್ನು ರಾಜ್ಯದಾದ್ಯಂತ ಹಮ್ಮಿಕೊಂಡಿದ್ದು, ಈ ಸಂಬಂಧ ತುಮಕೂರು ಜಿಲ್ಲೆಯ ಎಲ್ಲಾ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಮಾನ್ಯ ಜಿಲ್ಲಾಧಿಕಾರಿಗಳು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ. (ಪ್ರತಿ ಲಗತ್ತಿಸಿದೆ)

ಈ ಹಿನ್ನೆಲೆಯಲ್ಲಿ ತುಮಕೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಎಲ್ಲಾ ಘಟಕ ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ **ಸಂವಿಧಾನ ಕುರಿತಾದ ಪ್ರಬಂಧ ಸ್ಪರ್ಧೆ, ಚರ್ಚಾ ಸ್ಪರ್ಧೆ, ಆಶುಭಾಷಣ ಸ್ಪರ್ಧೆ, ರಸಪ್ರಶ್ನೆ ಇತ್ಯಾದಿ ಕಾರ್ಯಕ್ರಮಗಳನ್ನು ದಿನಾಂಕ:23.01.2024 ರೊಳಗಾಗಿ ಏರ್ಪಡಿಸಿ,** ಆಯ್ಕೆಯಾದ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿ/ಪುರಸಭೆ/ಪಟ್ಟಣ ಪಂಚಾಯಿತಿ/ನಗರಸಭೆ ಅಧಿಕಾರಿಗಳಿಗೆ ನೇರವಾಗಿ ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ.

**ಆದೇಶದ ಮೇರೆಗೆ**

20/1/24

**ಕುಲಸಚಿವರು**
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.**
2. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು.**
3. **ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು:**

1. ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **(ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಘಟಕ & ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)**
4. ಕಚೇರಿ ಪ್ರತಿ.

ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)

**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ತುಮಕೂರು ಜಿಲ್ಲೆ, ತುಮಕೂರು**

ದೂರವಾಣಿ ಸಂಖ್ಯೆ: 0816-2272480, E mail: deo.tumkur@gmail.com

ಸಂಖ್ಯೆ:ಜಂಸಿ/ಸಕಇ/ತು/ಸಂ.ಆ/ಸಿಆರ್ /2023-24 ದಿನಾಂಕ:18.01.2024

ರವರಿಗೆ,

ಕುಲಸಚಿವರು.
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು ಜಿಲ್ಲೆ.

ಮಾನ್ಯರೇ.

ವಿಷಯ:- ದಿನಾಂಕ 26.1.2024 ರಂದು ಗಣರಾಜ್ಯೋತ್ಸವ ದಿನದಂದು ಸಂವಿಧಾನ ಜಾಗೃತಿ ಜಾತ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದಲ್ಲಿ ಚಾಲನೆ ನೀಡುವ ಕುರಿತು.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ:ಸಕಇ 264 ಎಸ್‌ಎಲ್‌ಪಿ 2023, ಬೆಂಗಳೂರು, ದಿನಾಂಕ:14.01.2024

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರದ ಆದೇಶದನ್ವಯ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸಂವಿಧಾನ ಜಾಗೃತಿ ಜಾತ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿರುತ್ತದೆ. ಅದೇ ರೀತಿ ತುಮಕೂರು ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾತ ಕಾರ್ಯಕ್ರಮಕ್ಕೆ ಜಿಲ್ಲಾ ಮಟ್ಟದಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ದಿನಾಂಕ:26.01.2024 ರಂದು ಚಾಲನೆ ನೀಡಲಿದ್ದಾರೆ, ನಂತರ ಸಂವಿಧಾನ ಜಾಗೃತಿ ಜಾತ ತುಮಕೂರು ಜಿಲ್ಲೆಯ ಪ್ರತಿಯೊಂದು ಗ್ರಾಮ ಪಂಚಾಯಿತಿಗೆ ಸಂಚರಿಸಲಿದ್ದು, ಸದರಿ ಗ್ರಾಮ ಪಂಚಾಯತಿಗಳಲ್ಲಿ ಸಂವಿಧಾನ ಕುರಿತು ನಾಗರಿಕರಿಗೆ ಮತ್ತು ಸಮಾಜದ ಸರ್ವರಿಗೂ ಸಂವಿಧಾನದ ಕಾರ್ಯಕ್ರಮ ಸಂವಿಧಾನದ ಮಹತ್ವವನ್ನು ತಿಳಿಸುವ ಮತ್ತು ಪ್ರಚಾರ ಪಡಿಸುವ ಕಾರ್ಯಕ್ರಮ ಇದಾಗಿರುತ್ತದೆ. ಈ ಕಾರ್ಯಕ್ರಮದ ಅಂಗವಾಗಿ ತುಮಕೂರು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಸಂವಿಧಾನ ಕುರಿತು ಪ್ರಬಂಧ ಸ್ಪರ್ಧೆ, ಚರ್ಚಾ ಸ್ಪರ್ಧೆ, ಆಶುಭಾಷಣ ಸ್ಪರ್ಧೆ, ರಸಪ್ರಶ್ನೆ, ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಇವುಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳಾದಲ್ಲಿ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳಲ್ಲಿ ಜಾತ ಕಾರ್ಯಕ್ರಮ ತಲುಪಿದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪ್ರಶಸ್ತಿಗಳನ್ನು ವಿತರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾಗಿರುತ್ತದೆ.ಅದೇ ರೀತಿಯಲ್ಲಿ ನಗರ ಪ್ರದೇಶದ ವಿದ್ಯಾರ್ಥಿಗಳಾಗಿದ್ದಲ್ಲಿ ತಾಲ್ಲೂಕು ಕೇಂದ್ರಗಳಲ್ಲಿ ಜಾಗೃತಿ ಜಾತ ತಲುಪಿದ ವೇಳೆಯಲ್ಲಿ ಆಯಾ ವಿದ್ಯಾರ್ಥಿಗಳಿಗೆ ಪ್ರಶಸ್ತಿಗಳನ್ನು ವಿತರಿಸಲು ಕ್ರಮ ವಹಿಸುವಂತೆ ಸೂಚಿಸಿದೆ.

ಈ ಹಿನ್ನೆಲೆಯಲ್ಲಿ ಈ ತಕ್ಷಣದಿಂದ ಜಾರಿಗೆ ಬರುವಂತೆ ತುಮಕೂರು ಜಿಲ್ಲೆಯ ಎಲ್ಲಾ ಕಾಲೇಜುಗಳಲ್ಲಿ ಸಮಗ್ರವಾಗಿ ಮತ್ತು ಸರ್ವವ್ಯಾಪಿಯಾಗಿ ಮೇಲಿನಂತೆ ಸಂವಿಧಾನ ಕುರಿತ ಸ್ಪರ್ಧ ಕಾರ್ಯಕ್ರಮಗಳನ್ನು ವಿದ್ಯಾರ್ಥಿಗಳಿಗೆ ಏರ್ಪಡಿಸುವುದು, ಈ ಸಂಬಂಧ ತುಮಕೂರು ಜಿಲ್ಲೆಯ ಎಲ್ಲಾ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಬಗ್ಗೆ ಸ್ಪಷ್ಟ ಸೂಚನೆಯನ್ನು ನೀಡಿ ಸಂವಿಧಾನ ಕುರಿತ ವಿವಿಧ ಸ್ಪರ್ಧೆಗಳನ್ನು ವಿದ್ಯಾರ್ಥಿಗಳಿಗೆ ಏರ್ಪಡಿಸಿ ಆಯ್ಕೆಯಾದ ವಿದ್ಯಾರ್ಥಿಗಳ ಪಟ್ಟಿಗಳನ್ನು ತಯಾರಿಸಿಕೊಂಡು ಆಯಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನೀಡಿ ಸಂವಿಧಾನ ಜಾಗೃತಿ ಜಾತ ಕಾರ್ಯಕ್ರಮದಲ್ಲಿ

ಆಯಾ ಪಂಚಾಯತಿಗಳಲ್ಲಿ/ಪುರಸಭೆ/ ಪಟ್ಟಣ ಪಂಚಾಯಿತಿ/ ನಗರಸಭೆಗಳಲ್ಲಿ ಸಂಬಂಧಿಸಿದ ವಿಜೇತ ವಿದ್ಯಾರ್ಥಿಗಳಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸುವಂತೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿ. ಹಾಗೂ ಈ ಸಂಬಂಧ ತೆಗೆದುಕೊಂಡ ಕ್ರಮದ ಬಗ್ಗೆ ವರದಿಯನ್ನು ಸಮಾಜ ಕಲ್ಯಾಣ ಇಲಾಖೆಗೆ ಆಯಾ ತಹಸೀಲ್ದಾರ್ ಅವರಿಗೆ ಮತ್ತು ಈ ಕಚೇರಿಗೆ ವರದಿ ಸಲ್ಲಿಸಲು ಸೂಚಿಸಿದೆ.

ತಮ್ಮ ನಂಬುಗೆಯ

ಜಿಲ್ಲಾಧಿಕಾರಿಗಳು
ತುಮಕೂರು ಜಿಲ್ಲೆ.